[redacted]



# ಬೆಳಗಾವಿ ಮತಕ್ಷೇತ್ರ : ಒಟ್ಟು 7 ಚೆಕ್ ಪೋಸ್ಟ್-ಪಿ.ಎನ್.ಲೋಕೇಶ



ಬೆಳಗಾವಿ: ಬೆಳಗಾವಿ ಲೋಕಸಭಾ ಮತಕ್ಷೇತ್ರದ ವ್ಯಾಪ್ತಿಯ ಬೆಳಗಾವಿ ಉತ್ತರ ಮತ್ತು ದಕ್ಷಿಣ ಮತಕ್ಷೇತ್ರಗಳಲ್ಲಿ ನ್ಯಾಯಸಮ್ಮತ ಚುನಾವಣೆ ನಡೆಸಲು ಅಗತ್ಯ ಕ್ರಮ ಕೈಗೊಳ್ಳಲಾಗಿದ್ದು, ಎರಡೂ ಕ್ಷೇತ್ರದ ವ್ಯಾಪ್ತಿಯಲ್ಲಿ ಒಟ್ಟು 7 ಚೆಕ್ ಪೋಸ್ಟ್ ಗಳನ್ನು ತೆರೆಯಲಾಗಿದೆ ಎಂದು ಸಹಾಯಕ ಚುನಾವಣಾಧಿಕಾರಿಯಾಗಿರುವ ಪಾಲಿಕೆ ಆಯುಕ್ತ ಪಿ.ಎನ್. ಲೋಕೇಶ ತಿಳಿಸಿದರು.

ನಗರದಲ್ಲಿ ಸೋಮವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಈಗಾಗಲೇ ಮಾದರಿ ನೀತಿ ಸಂಹಿತೆ ಜಾರಿಯಾಗಿದ್ದು, ಬೆಳಗಾವಿ ಲೋಕಸಭಾ ಮತಕ್ಷೇತ್ರದ ವ್ಯಾಪ್ತಿಯೂ ನೀತಿ ಸಂಹಿತೆಯನ್ನು ಕಟ್ಟುನಿಟ್ಟಾಗಿ ಪಾಲಿಸಲಾಗುವುದು. ಯಾವುದೇ ತರಹದ ಅವಘಡ, ಅಕ್ರಮಗಳಿಗೆ ಅವಕಾಶ ಕೊಡುವುದಿಲ್ಲ ಎಂದರು.

ಈಗಾಗಲೇ ಉತ್ತರ ಕ್ಷೇತ್ರದಲ್ಲಿ 3 ಹಾಗೂ ದಕ್ಷಿಣ ಮತಕ್ಷೇತ್ರದಲ್ಲಿ 4 ಚೆಕ್ ಪೋಸ್ಟ್ ಗಳನ್ನು ತೆರೆಯಲಾಗಿದೆ. ಅಲ್ಲದೇ, ಉತ್ತರದಲ್ಲಿ 257 ಹಾಗೂ ದಕ್ಷಿಣ ಮತಕ್ಷೇತ್ರದ ವ್ಯಾಪ್ತಿಯಲ್ಲಿ 256 ಮತಗಟ್ಟೆಗಳ ಸ್ಥಾಪನೆ ಮಾಡಲಾಗುವುದು. ಉತ್ತರದಲ್ಲಿ 26 ಹಾಗೂ ದಕ್ಷಿಣದಲ್ಲಿ 17 ಸೂಕ್ಷ್ಮ ಮತಗಟ್ಟೆಗಳನ್ನು ಗುರುತಿಸಲಾಗಿದೆ ಎಂದು ಅವರು ವಿವರಿಸಿದರು.

ಉತ್ತರದಲ್ಲಿ 2.61.523 ಮತದಾರರಿದ್ದರೆ, ದಕ್ಷಿಣದಲ್ಲಿ 2.55.024 ಮತದಾರರು ಮತ ಚಲಾಯಿಸಲಿದ್ದಾರೆ. ಎರಡೂ ಕ್ಷೇತ್ರಗಳಲ್ಲಿ 324 ಹಾಗೂ 512 ನೌಕರರು ಹೊರಗಡೆ ಸೇವೆಯಲ್ಲಿದ್ದು, ಅವರು ಅಂಚೆ ಮತದಾನ ಮಾಡಲಿದ್ದಾರೆ. ಇನ್ನು ಉತ್ತರದಲ್ಲಿ 5.677 ಹಾಗೂ ದಕ್ಷಿಣದಲ್ಲಿ 5.061 ಹೊಸದಾಗಿ ಸೇರ್ಪಡೆಗೊಂಡಿರುವ ಮತದಾರರು ಮೊದಲ ಬಾರಿ ತಮ್ಮ ಹಕ್ಕು ಚಲಾಯಿಸಲಿದ್ದಾರೆ ಎಂದು ಪಿ.ಎನ್.ಲೋಕೇಶ ವಿವರಿಸಿದರು.

ಅನುಮತಿ ಕಡ್ಡಾಯ

ಎರಡೂ ಮತಕ್ಷೇತ್ರಗಳ ವ್ಯಾಪ್ತಿಯಲ್ಲಿ ಯಾವುದೇ ಸಭೆ ಸಮಾರಂಭ ನಡೆಸಲು ಪೂರ್ವಾನುಮತಿ ಕಡ್ಡಾಯವಾಗಿದೆ. ರಾಜಕೀಯ ನಾಯಕರು ಯಾವುದೇ ಖಾಸಗಿ ಅಥವಾ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಬಹುದು ಅವರು ಅಲ್ಲಿ ಮತದಾರರ ಮೇಲೆ ಪ್ರಭಾವ ಬೀರುವ ಯಾವುದೇ ಭರವಸೆ ಅಥವಾ ರಾಜಕೀಯ ಪ್ರೇರಿತ ಭಾಷಣ ಮಾಡಲು ಅವಕಾಶ ಇರುವುದಿಲ್ಲ ಎಂದು ಅವರು ಹೇಳಿದರು.

ಭಾರತ ಚುನಾವಣಾ ಆಯೋಗವು ಈಗಾಗಲೇ ಸುವಿದಾ ಆನ್ ಲೈನ್ ವ್ಯವಸ್ಥೆ ಕಲ್ಪಿಸಿದ್ದು, ರಾಜಕೀಯ ಪಕ್ಷಗಳು ರ್ಯಾಲಿ, ಸಭೆ ಸಮಾರಂಭ ಜಾಥಾ ನಡೆಸುವುದಕ್ಕಾಗಿ ಆನ್ ಲೈನ್ ನಲ್ಲಿ ಅರ್ಜಿ ಹಾಕಿ ಅನುಮತಿ ಪಡೆದುಕೊಳ್ಳಬೇಕು. ಖಾಸಗಿಯಾಗಿ ನಡೆಯುವ ಮದುವೆ ಹಾಗೂ ಇನ್ನಿತರ ಸಮಾರಂಭಗಳಿಗೆ ಅನುಮತಿ ಅಗತ್ಯವಿರುವುದಿಲ್ಲ. ಆದರೆ, ಒಂದುವೇಳೆ ರಾಜಕೀಯ ವ್ಯಕ್ತಿಗಳನ್ನು ಆಹ್ವಾನಿಸಿದರೆ ಅಲ್ಲಿ ಯಾವುದೇ ರೀತಿಯ ರಾಜಕೀಯ ಚಟುವಟಿಕೆ ನಡೆಯಕೂಡದು ಎಂದರು.

ಇನ್ನೂ ಯಾರಾದರು ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆ ಮಾಡಲು ಅಥವಾ, ತಿದ್ದುಪಡಿ ಮಾಡಲು ಅವಕಾಶ ಕಲ್ಪಿಸಲಾಗಿದ್ದು, ಮತದಾರರು ಇದರ ಸದುಪಯೋಗ ಪಡೆದುಕೊಳ್ಳಬೇಕು. ಮತದಾರಿಗಾಗಿಯೇ ಇರುವ ಹೆಲ್ಪ್ ಲೈನ್ ಬಳಸಿಕೊಂಡು ನೋಂದಣಿ ಮಾಡಿಕೊಳ್ಳಬಹುದು ಎಂದು ಸಹಾಯಕ ಚುನಾವಣಾಧಿಕಾರಿ ಪಿ.ಎನ್. ಲೋಕೇಶ ಮನವಿ ಮಾಡಿದರು.

ಪಾಲಿಕೆ ಉಪ ಆಯುಕ್ತ ಉದಯಕುಮಾರ ತಳವಾರ ಸೇರಿಂತೆ ಮತ್ತಿತರರು ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

# ದಕ್ಷ ಹಾಗೂ ಪ್ರಾಮಾಣಿಕ ಮಂಡ್ಯ ಎಸ್ ಪಿ ಎನ್ ಯತೀಶ್‌ರವರಿಗೆ ಗದಗ ಸವಿತಾ ಸಮಾಜದಿಂದ ಸನ್ಮಾನ



ಮಂಡ್ಯ 14: ದಕ್ಷ ಹಾಗೂ ಪ್ರಾಮಾಣಿಕ ಪೋಲೀಸ್ ಅಧಿಕಾರಿಗಳು ಮತ್ತು ಮಂಡ್ಯ ಜಿಲ್ಲಾ ಪೋಲಿಸ ವರಿಷ್ಠಾಧಿಕಾರಿಗಳಾದ ಎನ್ ಯತೀಶ್ ಅವರು ಪೊಲೀಸ್ ಇಲಾಖೆಯಲ್ಲಿ ತನ್ನದೇ ಆದ ವೈಶಿಷ್ಟ್ಯತೆಯನ್ನು ರೂಡಿಸಿಕೊಂಡು ಬಂದಿದ್ದಾರೆ ಇವರು ಒಬ್ಬ ಸಮರ್ಥ ಪೊಲೀಸ್ ಅಧಿಕಾರಿ ಎಂದರೆ ತಪ್ಪಲಾಗಲಾರದು ಎಂದು ಗದಗ ಜಿಲ್ಲಾ ಸವಿತಾ ಸಮಾಜದ ಜಿಲ್ಲಾಧ್ಯಕ್ಷರಾದ ಕೃಷ್ಣಾ ಎಚ್ ಹಡಪದ ಅಭಿಮಾನದಿಂದ ಮಾತನಾಡಿದರು

ಅವರು ಮೈಸೂರುದಿಂದ ಗದಗ ಪ್ರಯಾಣ ಮಾಡುತ್ತಿದ್ದ ಸಂದರ್ಭದಲ್ಲಿ ಕೆಲಕಾಲ ಮಂಡ್ಯ ನಗರದಲ್ಲಿ ತಂಗಿದ್ದಾಗ ಸ್ಥಳಿಯ ಮಂಡ್ಯ ಜಿಲ್ಲಾ ಸವಿತಾ ಸಮಾಜದ ಜಿಲ್ಲಾಧ್ಯಕ್ಷರು ಹಾಗೂ ಪ್ರಮುಖರನ್ನು ಜತೆಗೂಡಿಸಿಕೊಂಡು ಮಂಡ್ಯ ಎಸ್ ಪಿ. ಗಳಾದ ಎನ್ ಯತೀಶ್ ಅವರಿಗೆ ಅವರ ಕಚೇರಿಯಲ್ಲಿ ಭೇಟಿ ಮಾಡಿ ಕುಶಲೋಪರಿ ಮಾತನಾಡಿ ಗದಗ ಜಿಲ್ಲಾ ಸವಿತಾ ಸಮಾಜದಿಂದ ಗೌರವ ಸನ್ಮಾನ ಸಲ್ಲಿಸಿ ಮಂಡ್ಯ ಜಿಲ್ಲಾ ಸವಿತಾ ಸಮಾಜದ ಸಮಗ್ರ ಒಳಿತಕ್ಕೆ ಸಹಕಾರ ಕೋರಿ ಮಾತನಾಡಿ ಸರ್ಕಾರಿ ಕೆಲಸ ದೇವರ ಕೆಲಸ ಎಂದು ನಂಬಿ ಕರ್ತವ್ಯ ನಿರ್ವಹಿಸುತ್ತಿರುವ ಎನ್ ಯತೀಶ್ ಇವರ ವೃತ್ತಿಕಾರ್ಯ ಪ್ರತಿಯೊಬ್ಬ ಪೊಲೀಸರಿಗೆ ಹಿಡಿದ ಕೈಗನ್ನಡಿಯಂತಿದೆ ಎಂದರಲ್ಲದೆ ಈಗಾಗಲೇ ಗದಗ ಜಿಲ್ಲೆಯಲ್ಲಿ ಎಸ್ಪಿಯಾಗಿ, ಅತ್ಯಂತ ಪ್ರಾಮಾಣಿಕತೆ, ದಕ್ಷತೆಯಿಂದ ಸೇವೆ ಸಲ್ಲಿಸಿ ಸ್ಥಳಿಯ ಸವಿತಾ ಸಮಾಜ ಸೇರಿದಂತೆ ಸಮಸ್ತ ಗದಗ ಜಿಲ್ಲೆಯ ಸಮಸ್ತ ಸಾರ್ವಜನಿಕರ ಪ್ರಶಂಸೆಗೆ ಪಾತ್ರರಾಗಿದ್ದಾರೆ ಮುಂದುವರಿದು ಸದ್ಯ ಇವರು ಮಂಡ್ಯ ಜಿಲ್ಲೆಯ ಎಸ್ ಪಿ ಯಾಗಿ ಕರ್ತವ್ಯ ನಿರ್ವಹಿಸುತ್ತಿರುವುದು ಅಭಿನಂದನಾರ್ಹ ಎಂದು ಗದಗ ಜಿಲ್ಲಾ ಸವಿತಾ ಸಮಾಜದ ಜಿಲ್ಲಾಧ್ಯಕ್ಷರಾದ ಕೃಷ್ಣಾ ಎಚ್ ಹಡಪದ ತಿಳಿಸಿದರು

ಈ ಸಂದರ್ಭದಲ್ಲಿ ಗದಗಿನ ರಾಜು ಕಧಡಿ ಮಂಡ್ಯ ಜಿಲ್ಲಾ ಸವಿತಾ ಸಮಾಜದ ಜಿಲ್ಲಾಧ್ಯಕ್ಷರಾದ ಪ್ರತಾಪ. ಹಿರಿಯರಾದ ಜಯರಾಮಣ್ಣವರು ಮಂಡ್ಯ ಕಜಾಂಚಿಗಳಾದ ನಾಗರಾಜಣ್ಣವರು ಪ್ರಮುಖ ನಾಯಕರಾದ ಕೊತ್ತತ್ತಿ ಅನೀಲಕುಮಾರ ಆನಂದ. ಹಾಗೂ ಮಂಡ್ಯ ಸವಿತಾ ಸಮಾಜದ ಪ್ರಮುಖ ಮುಖಂಡರು ಹಿರಿಯರು ಯುವನಾಯಕರು ಉಪಸ್ಥಿತರಿದ್ದರು

### ಎಪಿಎಂಸಿ ಅಧ್ಯಕ್ಷರಾಗಿ ಕಟ್ಟೆಮನೆ ನಾಗೇಂದ್ರ ನೇಮಕ

# ರೈತರ ಏಳಿಗೆಗೆ ನನ್ನ ಶಕ್ತಿಯನ್ನು ಮೀರಿ ಶ್ರಮಿಸುತ್ತೇನೆ-ಕಟ್ಟೆಮನೆ ನಾಗೇಂದ್ರ



ಬಳ್ಳಾರಿ ಮಾ:. ಮಾಜಿ ಶಾಸಕ ನಾರಾ ಸೂರ್ಯನಾರಾಯಣ ರೆಡ್ಡಿ ಅವರ ಆಪ್ತ ಕಟ್ಟೆಮನೆ ನಾಗೇಂದ್ರ ಅವರು ಬಳ್ಳಾರಿಯ ಕೃಷಿ ಉತ್ಪನ್ನಮಾರುಕಟ್ಟೆಯ ಅಧ್ಯಕ್ಷರನ್ನಾಗಿ ನೇಮಕ ಮಾಡಿ ಸರ್ಕಾರ ಆದೇಶ ಹೊರಡಿಸಿದೆ. ಜಿಲ್ಲಾ ಉಸ್ತುವಾರಿ ಸಚಿವ ಬಿ.ನಾಗೇಂದ್ರ, ನಗರ ಶಾಸಕ ನಾರಾ ಭರತ್ ರೆಡ್ಡಿ ಮತ್ತು ಪಕ್ಷದ ಇನ್ನಿತರ ನಾಯಕರ ಸಹಕಾರದಿಂದ ಈ ಸ್ಥಾನವನ್ನು ಪಕ್ಷದಲ್ಲಿನ ನನ್ನ ಸೇವೆಯನ್ನು ಪರಿಗಣಿಸಿ ನೀಡಿದ್ದು. ರೈತರ ಏಳಿಗೆಗಾಗಿ ಸಮಿತಿಯಿಂದ ಆದಷ್ಟು ಶಕ್ತಿಯನ್ನು ಮೀರಿ ಶ್ರಮಿಸುತ್ತೇನೆಂದು ಕಟ್ಟೆಮನೆ ನಾಗೇಂದ್ರ ಹೇಳಿದ್ದಾರೆ. ಎಪಿಎಂಸಿಯ ದಳಾಲಿ ವರ್ತಕರು ಹಾಗು ಖರೀದಿದಾರರ ಪೂರ್ತಿ ಸಹಕಾರ ಇರಬೇಕೆಂದು ಕೋರಿದರು.

ಇವರೊಂದಿಗೆ ಸಮಿತಿಗೆ ಉಪಾಧ್ಯಕ್ಷರಾಗಿ ಹುಲಿಯಪ್ಪ ಕೊಳಗಲ್ಲು, ಸದಸ್ಯರಾಗಿ ಹಸ್ತ ಪಂಪನಗೌಡ ಜಾಲಿಹಾಳ್, ಕುಂಟನಾಳ್ ಮಲ್ಲಿಕಾರ್ಜುನಗೌಡ, ಹಲಕುಂದಿ ಮುಂದಾಲಪ್ಪ, ವಿಶ್ವನಾಥ್ ನಾಯಕ, ಕುದಾನ್ ಸಾಬ್, ಅಕ್ಕಿ ನಾಗರತ್ನಮ್ಮ, ಹೆಚ್.ಗವಿಸಿದ್ದನಗೌಡ, ಕನ್ಯಾ ನಾಯ್ಕ, ಯಲ್ಲಪ್ಪ ಬಿ. ಅವರನ್ನು ನೇಮಕ ಮಾಡಲಾಗಿದೆ.

## ನಾಲತವಾಡದ ವೀರೇಶ್ವರ ಶರಣರ ಜಯಂತ್ಯುತ್ಸವ ಕಾರ್ಯಕ್ರಮ

# ವೀರೇಶ್ವರ ಶರಣರು ಸಮಾಜದಲ್ಲಿ ಮೂಢನಂಬಿಕೆಯನ್ನು ಕಿತ್ತೂಗೆಯಲು ಪ್ರಯತಿಸಿದರು:ಮರುಳಾರಾಧ್ಯ ಶ್ರೀಗಳು



ಗದಗ: ನಾಲತವಾಡದ ವೀರೇಶ್ವರ ಶರಣರು ಶಿಕ್ಷಕರಾಗಿ, ಕೃಷಿಕರಾಗಿ ಜಂಗಮ ದಾಸೋಹದಲ್ಲಿ ನಿರತರಾಗಿದ್ದರು. ಗ್ರಾಮ ದೇವತೆಯ ಜಾತ್ರೆಯಲ್ಲಿ ಪ್ರಾಣಿಬಲಿ ಕೊಡುವುದನ್ನು ವಿರೋಧಿಸಿದರು. ಅವರು ಹುಟ್ಟಿ ಬೆಳೆದದ್ದು ನಾಲತವಾಡವಾದರೂ ಸಾಧನೆ ಮಾಡಿದ ಕ್ಷೇತ್ರ ಸೋಲಾಪುರದಲ್ಲಿ ಎಂದು ಅಳವಂಡಿಯ ಸಿದ್ದೇಶ್ವರ ಸಂಸ್ಥಾನ ಕಟ್ಟಿಮನಿ ಹಿರೇಮಠದ ಮರುಳಾರಾಧ್ಯ ಶಿವಾಚಾರ್ಯ ಸ್ವಾಮೀಜಿ ಹೇಳಿದರು.

ತಾಲೂಕಿನ ನರಸಾಪೂರ ಗ್ರಾಮದ ನಾಲತವಾಡ ವೀರೇಶ್ವರ ಶರಣರ ಮಠದಲ್ಲಿ ವೀರೇಶ್ವರ ಶರಣರ ಜಯಂತ್ಯುತ್ಸವ, ಮಹಾರಥೋತ್ಸವ ಹಾಗೂ ಚಂದ್ರಶೇಖರ ಶರಣರ 11ನೇ ಪುಣ್ಯಸ್ಮರಣೋತ್ಸವದ ಅಂಗವಾಗಿ ನಡೆದ ಧರ್ಮಸಭೆಯಲ್ಲಿ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಸಮಾಜದಲ್ಲಿ ಮೂಢನಂಬಿಕೆಯನ್ನು ಬುಡ ಸಮೇತ ಕಿತ್ತೂಗೆಯಬೇಕು. ಸರ್ವ ಸಮಾಜದಲ್ಲಿ ಸಮನ್ವತೆ, ಸಹಕಾರ ಮೂಡಿಸಿ, ಜಾತಿ, ಭೇದ, ಭಾವಗಳನ್ನು ತೊಲಗಿಸಿ ಪ್ರಾಣಿಬಲಿಗೆ ಕಡಿವಾಣ ಹಾಕುವಲ್ಲಿ ತಮ್ಮ ದಿನ ನಿತ್ಯದ ಕಾಯಕದೊಂದಿಗೆ ಅವಿರತವಾಗಿ ಶ್ರಮಿಸಿದರು. ವೀರೇಶ್ವರ ಶರಣರು ದೇಹ ತೊರೆಯುವವರೆಗೂ ಸಂಕಲ್ಪದ ಬದುಕನ್ನೇ ನಡೆಸಿದರು ಎಂದು ಹೇಳಿದರು.

ಶ್ರೀಮಠದ ಪೀಠಾಧಿಪತಿ ಶಿವಕುಮಾರ ಶರಣರು ಮಾತನಾಡಿ, ವೀರೇಶ್ವರ ಶರಣರು ತಮ್ಮ ಕಾಯಕದ ಮೂಲಕ ಬಂದ ಹಣವನ್ನು ದಾಸೋಹ ನಡೆಸುತ್ತಿದ್ದರು. ನಂತರ ವೀರೇಶ್ವರ ಶರಣರ ಪ್ರೇರಣೆಯಿಂದ ಚಂದ್ರಶೇಖರ ಶರಣರು ನರಸಾಪೂರ ಗ್ರಾಮದಲ್ಲಿ 1974ರಲ್ಲಿ ವೀರೇಶ್ವರ ಶರಣರ ಮಠವನ್ನು ಸ್ಥಾಪಿಸಿ ನಿತ್ಯ ಪೂಜಾ ಕೈಂಕರ್ಯಗಳನ್ನು ನಡೆಸುತ್ತ, ಭಕ್ತರ ಸಮಸ್ಯೆಗಳನ್ನು ಪರಿಹರಿಸುತ್ತ ಶ್ರೀಮಠವನ್ನು ಮುನ್ನಡೆಸಿಕೊಂಡು ಬಂದರು. ಶ್ರೀಮಠದಲ್ಲಿ ಪ್ರತಿವರ್ಷ ವೀರೇಶ್ವರ ಶರಣರ ಜಯಂತ್ಯುತ್ಸವ ಹಾಗೂ ಚಂದ್ರಶೇಖರ ಶರಣರ ಪುಣ್ಯಸ್ಮರಣೋತ್ಸವ ಆಚರಿಸಿಕೊಂಡು ಬರಲಾಗುತ್ತಿದೆ ಎಂದರು.

ಇದಕ್ಕೂ ಮುನ್ನ ಬೆಳಿಗ್ಗೆ ಆಟಸ್ಥಲ ಧ್ವಜಾರೋಹಣ, ವೀರೇಶ್ವರ ಶರಣರ ಹಾಗೂ ಚಂದ್ರಶೇಖರ ಶರಣರ ಮೂರ್ತಿಗಳಿಗೆ ಮಹಾರುದ್ರಾಭಿಷೇಕ ನಂತರ ಚಂದ್ರಶೇಖರ ಶರಣರ ಪುಣ್ಯಸ್ಮರಣೋತ್ಸವ ಕಾರ್ಯಕ್ರಮ ಜರುಗಿತು. ಮಹೇಶ ಕುಂದ್ರಾಳಹಿರೇಮಠ ಅವರಿಂದ ಸಂಗೀತ ಕಾರ್ಯಕ್ರಮ ಜರುಗಿತು.

ಕಾರ್ಯಕ್ರಮದಲ್ಲಿ ಕಳಕಮಲ್ಲಯ್ಯ ಹಿರೇಮಠ, ಕೆ.ಎಸ್. ಹಿರೇಮಠ, ಡಾ। ನಾಗರತ್ನಮ್ಮ, ಉಮೇಶ ಶಿವಶಿಂಪರ ಸೇರಿ ಅನೇಕರು ಇದ್ದರು. ಎಸ್.ಐ. ಪಾಟೀಲ ಸ್ವಾಗತಿಸಿದರು. ಡಾ। ಸುಜಾತಾ ಪಾಟಿಲ ಪ್ರಾಸ್ತಾವಿಕ ಮಾತನಾಡಿದರು. ಬಿ.ಎಲ್. ಹೊಸಳ್ಳಿಹಿರೇಮಠ ನಿರೂಪಿಸಿದರು. ಲಿಂಗರಾಜ್ ಕಬ್ಬೂರ ವಂದಿಸಿದರು.

## ಮೌಲಾನಾ ಆಜಾದ್ ಮಾದರಿ ಶಾಲೆಗಳಿಗೆ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

ಬೆಳಗಾವಿ,ಮಾ. : 2024-25ನೇ ಸಾಲಿನ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಬೆಳಗಾವಿ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಮೌಲಾನಾ ಆಜಾದ್ ಮಾದರಿ ಶಾಲೆಗಳ ಶೈಕ್ಷಣಿಕ ಸಾಲಿನಲ್ಲಿ 6ನೇ ತರಗತಿಗಳಿಗೆ ಪ್ರವೇಶ ಪಡೆಯಲು ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ ಮತ್ತು ಪಾರ್ಸಿವಿದ್ಯಾರ್ಥಿಗಳ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆಸಕ್ತಿ ವಿದ್ಯಾರ್ಥಿಗಳು ಹಾಗೂ ಪಾಲಕರು ಏ.14 ಒಳಗಾಗಿ ಅಧಿಕೃತ ಜಾಲ ತಾಣದಲಿè http://dom.karnataka.in ನೇರವಾಗಿ ಅರ್ಜಿ ಸಲ್ಲಿಸಬಹುದು. ಅಥವಾ ತಮ್ಮ ಹತ್ತಿರದ ಮೌಲಾನಾ ಆಜಾದ ಮಾದರಿ ಶಾಲೆಗಳು, ಅಲ್ಪಸಂಖ್ಯಾತರ ಜಿಲ್ಲಾ/ತಾಲೂಕು ಮಾಹಿತಿ ಕೇಂದ್ರಗಳಲ್ಲಿ ಕೂಡ ಉಚಿತ ಅರ್ಜಿಗಳನ್ನು ಸಲ್ಲಿಸಬಹುದು ಎಂದು ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿಗಳಾದ ಡಾ. ಅಬ್ದುಲರಶೀದ ಎಮ್ ಮಿರ್ಜನ್ನವರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕರ್ನಾಟಕ ಕೊಳಗೇರಿ ಅಭಿವೃದ್ದಿ ಮಂಡಳಿಯ ನಿರ್ದೇಶಕರಾಗಿ ರಾಮಕೃಷ್ಣ ರೊಳ್ಳಿ ಆಯ್ಕೆ



ಗದಗ : ಕರ್ನಾಟಕ ಕೊಳಚೆ ಪ್ರದೇಶಗಳ ಅಭಿವೃದ್ಧಿ ಮತ್ತು ನಿರ್ಮೂಲನಾ ಮಂಡಳಿಗೆ ರಾಜ್ಯ ನಾಮನಿರ್ದೇಶಕರನ್ನಾಗಿ ಗದಗ ಜಿಲ್ಲೆಯ ಕಾಂಗ್ರೆಸ್ ಮುಖಂಡ ಹಾಗೂ ಹುಲಕೋಟಿ ಗ್ರಾಮದ ರಾಮೃಕೃಷ್ಣ ಎಸ್.ರೊಳ್ಳಿ ಅವರನ್ನು ನೇಮಕ ಮಾಡಿ ಸರಕಾರದ ಅಧೀನ ಕಾರ್ಯದರ್ಶಿ ವಸತಿ ಇಲಾಖೆ ಆದೇಶ ಹೊರಡಿಸಿದ್ದಾರೆ.

## ಮೃತ ದೇಹ ಪತ್ತೆ

ಬೆಳಗಾವಿ,ಮಾ.: ಘಟಪ್ರಭಾ ರೈಲ್ವೆ ನಿಲ್ದಾಣದ ಯಾರ್ಡ ಹತ್ತಿರ ಮಾ.16 ರಂದು ಚಲಿಸುವ ರೈಲಿಗೆ ಸಿಕ್ಕು ಸ್ಥಳದಲ್ಲಿಯೇ ಮೃತಪಟ್ಟಿದ್ದು ಅಪರಿಚಿತ ವ್ಯಕ್ತಿ ಮೃತ ಪಟ್ಟಿದ್ದು, ಈ ಕುರಿತು ಬೆಳಗಾವಿ ರೈಲ್ವೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಳ್ಳಲಾಗಿರುತ್ತದೆ.



ಮೃತನ ವಿವರ: ವಯಸ್ಸು 35-40, ಎತ್ತರ 5'6, ಸಾದ ಕಪ್ಪು ಗಪ್ಪು ಮೈ ಬಣ್ಣ, ಸದೃಡ ಮೈಕಟ್ಟು, ಬೂದು ಬಣ್ಣದ ಸಣ್ಣಗೆರೆಯುಳ್ಳ ಚಕ್ಸ ಶರ್ಟ, ಬೂದು ಬಣ್ಣದ ಪುಲ್ ಪ್ಯಾಂಟ್, ಮುಖವು ರೈಲಿಗೆ ಸಿಲುಕಿರುವುದರಿಂದ ಗುರುತಿಸಲು ಬಾರದಂತೆ ಆಗಿರುತ್ತದೆ.

ಸದರಿ ಗುರುತು ಹೊಂದಿರುವ ಅಪರಿಚಿತನ ವಾರಸುದಾರರು ಪತ್ತೆಯಾಗಿರುವುದಿಲ್ಲ. ಗುರುತು ಹೋಲುವ ಗಂಡಸು ಕಾಣೆಯಾದ ಬಗ್ಗೆ ತಮ್ಮ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದರೆ ಅಥವಾ ಮೃತನ ರಕ್ತ ಸಂಬಂಧಿಗಳು ಪತ್ತೆಯಾದರೆ ಬೆಳಗಾವಿ ರೈಲ್ವೆ ಪೊಲೀಸ್ ಠಾಣೆ ದೂರವಾಣಿ ಸಂ: (0831) 2405273, ಪಿ.ಎಸ್.ಐ ಮೊ.ನಂ: 9480802127, ರೈಲ್ವೆ ಪೊಲೀಸ್ ನಿಯಂತ್ರಣ ಕೊಠಡಿ ದೂ. ಸಂ: 22871291 ಗೆ ಸಂಪರ್ಕಿಸಬಹುದು ಎಂದು ಬೆಳಗಾವಿ ರೈಲ್ವೆ ಪೊಲೀಸ್ ಠಾಣೆಯ ಆರಕ್ಷಕ ಉಪನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿದ್ಯುತ ಪ್ರಸರಣ: ಸಾರ್ವಜನಿಕರಿಗೆ ಎಚ್ಚರ

ಬೆಳಗಾವಿ,ಮಾ.18 : ಬೆಳಗಾವಿ ಜಿಲ್ಲೆಯ ಬೈಲಹೊಂಗಲ ತಾಲ್ಲುಕಿನಲ್ಲಿ ಕವಿಪ್ರನಿನಿಯ ಹಾಲಿ ಚಾಲ್ತಿಯಲ್ಲಿರುವ 110/11ಕೆವಿ ಉಡಕೇರಿ ವಿದ್ಯುತ್ ಉಪಕೇಂದ್ರದಿಂದ ಹೊಸುರ ಗ್ರಮದಲ್ಲಿ ಹೊಸದಾಗಿ ನಿರ್ಮಿಸಿರುವ 110/11ಕೆವಿ ವಿದ್ಯುತ್ ಉಪಕೇಂದ್ರಕ್ಕೆ ಜೋಡಿ ಗೋಪುರಗಳ ಮೇಲೆ 16.597ಕೀಮಿ ಉದ್ದದ ಒಂಟಿ ವಿದ್ಯುತ್ ಪ್ರಸರಣ ಮಾರ್ಗವನ್ನು ನಿರ್ಮಿಸಲಾಗಿದೆ. 110ಕೆವಿ ವಿದ್ಯುತ್ ಪ್ರಸರನ ಮಾರ್ಗವು ಬೆಳಗಾವಿ ಜಿಲ್ಲೆಯ ಬೈಲಹೊಂಗಲ ತಾಲೂಕಿನ ಹಿರೇಬೆಳವಡಿ, ಉಡಕೇರಿ, ಏನಗಿ, ಮಠಹಳ್ಳಿ, ಇಂಗಳಗಿ ಹಾಗೂ ಹೊಸುರು ಅಕ್ಕಪಕ್ಕದ ಹದ್ದಿನಲ್ಲಿ ಬರುವ ಹಳ್ಳಿಗಳು ಮತ್ತು ಸರಹದ್ದಿನ ವ್ಯಾಪ್ತಿಯಲ್ಲಿ ಬರುವ ಪ್ರದೇಶಗಳಲ್ಲಿ ಹಾಯ್ದು ಹೋಗುತ್ತದೆ.

ಸದರಿ ವಿದ್ಯುತ್ ಪ್ರಸರಣ ಮಾರ್ಗವನ್ನು ಮಾ. 22 ರಂದು ಇಲ್ಲವೆ ತದನಂತರ ಯಾವುದೇ ಕ್ಷಣದಲ್ಲಿ ವಿಧ್ಯುತ್‌ನ್ನು ಹರಿಬಿಡಲಾಗುತ್ತಿದ್ದು, ಸಾರ್ವಜನಕರು ಮಾರ್ಗದಲ್ಲಿ ವಿದ್ಯುತ್ ಗೋಪುರಗಳನ್ನು ಹತ್ತುವುದಾಗಲಿ ಅಥವಾ ತಂತಿಗಳನ್ನು ಮುಟ್ಟುವುದಾಗಲಿ, ಹಸಿರು ಟೊಂಗೆಗಳನ್ನು ಎಸೆಯುವುದಾಗಲಿ, ಲೈನ್ ಕೆಳಗಡೆ ದನಕರುಗಳನ್ನು ಕಟ್ಟುವುದಾಗಲಿ, ಗಿಡಮರಗಳನ್ನು ನೆಡುವುದಾಗಲಿ, ಮನೆ/ಗುಡಿಸಲುಗಳನ್ನು ನಿರ್ಮಿಸುವುದಾಗಲಿ ಮಾಡಬಾರದು.

ಒಂದು ವೇಳೆ ಇಂತಹ ಕೃತ್ಯಗಳನ್ನು ಯಾರಾದರು ಎಸಗಿದಲ್ಲಿ ಮುಂದೆ ಒದಗಬಹುದಾದ ಅಪಾಯಗಳಿಗೆ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತವು ಜವಾಬ್ದಾರಿಯಾಗಿರುವುದಿಲ್ಲ ಎಂದು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದ ಬೃಹತ್ ಕಾಮಗಾರಿ ವಿಭಾಗ, ಕಾರ್ಯನಿರ್ವಾಹಕ ಅಭಿಯಂತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿಜಯಪುರದಲ್ಲಿ 11,557 ಪ್ರಕರಣ ಇತ್ಯರ್ಥ

'ಜಿಲ್ಲಾದ್ಯಂತ ಕಳೆದ ಶನಿವಾರ ನಡೆದ ರಾಷ್ಟ್ರೀಯ ಲೋಕ್ ಅದಾಲತ್‌ನಲ್ಲಿ ಕಕ್ಷಿದಾರರು ಹಾಗೂ ವಕೀಲರ ಸಹಕಾರದಿಂದ ನ್ಯಾಯಾಲಯಗಳಲ್ಲಿ ವಿಚಾರಣೆಗಿದ್ದ ಪ್ರಕರಣಗಳ ಪೈಕಿ ಒಟ್ಟು 11,557 ಪ್ರಕರಣಗಳು ರಾಜಿ ಸಂಧಾನದ ಮೂಲಕ ಇತ್ಯರ್ಥಗೊಂಡಿವೆ' ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ಶಿವಾಜಿ ಅನಂತ ನಲವಡೆ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, 'ಆಸ್ತಿ ವಿಭಾಗ ಕೋರಿದ 169 ದಾವೆಗಳು, 227 ಚೆಕ್ ಬೌನ್ಸ್ ಪ್ರಕರಣಗಳು, ಮೋಟಾರು ವಾಹನ ಅಪಘಾತ ಪರಿಹಾರ ಕೋರಿದ 125, ಜೀವನಾಂಶ ಕೋರಿ ಸಲ್ಲಿಸಿದ 63, ರಾಜಿಯಾಗಬಹುದಾದ 78 ಕ್ರಿಮಿನಲ್ ಹಾಗೂ 518 ಅಮಲ್ಜಾರಿ ಪ್ರಕರಣಗಳನ್ನು ಇತ್ಯರ್ಥಗೊಳಿಸಲಾಗಿದೆ' ಎಂದು ಮಾಹಿತಿ ನೀಡಿದ್ದಾರೆ.

'ಕಕ್ಷಿದಾರರು ಬಹಳ ವರ್ಷ ಅಲೆದಾಡುವ ಬದಲು ಜನತಾ ನ್ಯಾಯಾಲಯದಲ್ಲಿ ರಾಜಿ ಸಂಧಾನದ ಮೂಲಕ ತಮ್ಮ ತಮ್ಮ ಪ್ರಕರಣಗಳನ್ನು ಇತ್ಯರ್ಥ ಪಡಿಸಿಕೊಂಡರೆ ಹಣ ಮತ್ತು ಸಮಯ ಎರಡೂ ಉಳಿಯುವಾ ಗುತ್ತದೆ' ಎಂದು ತಿಳಿಸಿದ್ದಾರೆ.

## ವೈದ್ಯರ ನಿರ್ಲಕ್ಷ್ಯ; ಬಾಣಂತಿ, ಮಗು ಇಬ್ಬರೂ ಸಾವು

ಬೆಳಗಾವಿ: ಮಗುವಿಗೆ ಜನ್ಮ ನೀಡಿದ ಕೆಲವೇ ಸಮಯದಲ್ಲಿ ಬಾಣಂತಿ ಹಾಗೂ ಮಗು ಇಬ್ಬರೂ ಸಾವನ್ನಪ್ಪಿರುವ ಘಟನೆ ಬೆಳಗಾವಿಯಲ್ಲಿ ನಡೆದಿದೆ.



ಬೆಳಗಾವಿಯ ಸಂತಿಬಸ್ತಿವಾಡ ಗ್ರಾಮದ ಲಕ್ಷ್ಮೀ ಹಳ್ಳಿ (28)ಗೆ ಹೆರಿಗೆ ನೋವು ಕಾಣಿಸಿಕೊಂಡ ಕಾರಣ ನಿನ್ನೆ ರಾತ್ರಿ ಕಿಣೆ ಸಮುದಾಯ ಆರೋಗ್ಯ ಕೇಂದ್ರಕ್ಕೆ ದಾಖಲಿಸಲಾಗಿತ್ತು. ಇಂದು ಬೆಳಿಗ್ಗೆ ಲಕ್ಷ್ಮೀ ಹೆಣ್ಣುಮಗುವಿಗೆ ಜನ್ಮ ನೀಡಿದ್ದರು.ಆದರೆ ಬಾಣಂತಿ ಲಕ್ಷ್ಮೀಗೆ ತೀವ್ರ ರಕ್ತಸ್ರಾವ ಆರಂಭವಾಗಿತ್ತು. ಇದರಿಂದ ವೈದ್ಯರು ಬೆಳಗಾವಿ ಭಿಮ್ಸ್ ಆಸ್ಪತ್ರೆಗೆ ಕರೆದೊಯ್ಯುವಂತೆ ಸೂಚಿಸಿದ್ದಾರೆ. ಹೆಚ್ಚಿನ ಚಿಕಿತ್ಸೆಗೆ ವೈದ್ಯರ ಸಲಹೆಯಂತೆ ಬಾಣಂತಿ, ಮಗುವನ್ನು ಭಿಮ್ಸ್ ಆಸ್ಪತ್ರೆಗೆ ಕರೆದೊಯ್ಯುತ್ತಿದ್ದಾಗ ಮಾರ್ಗ ಮಧ್ಯೆಯೇ ಬಾಣಂತಿ ಹಾಗೂ ಮಗು ಸಾವನ್ನಪ್ಪಿದ್ದಾರೆ.

ಇದರಿಂದ ನೊಂದ ಕುಟುಂಬದವರು ವೈದ್ಯರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಬಾಣಂತಿ ಮಗು ಸಾವಿಗೆ ವೈದ್ಯರ ಬೇಜವಾಬ್ದಾರಿ, ನಿರ್ಲಕ್ಷ್ಯವೇ ಕಾರಣ ವೈದ್ಯರ ವಿರುದ್ಧ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ಪ್ರತಿಭಟನೆ ನಡೆಸಿದ್ದಾರೆ. ಬೆಳಗಾವಿ ಗ್ರಾಮೀಣ ಠಾಣೆಯ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

## ಡಾ.ಅಶ್ವಿನಿ ಅವರಿಗೆ ಪಿಎಚ್‌ಡಿ ಪದವಿ

ವಿಜಯಪುರ: ಬೆಂಗಳೂರು ಕೃಷಿ ವಿಶ್ವವಿದ್ಯಾನಲಯದ (ಜಿಕೆವಿಕೆ) ಆಹಾರ ಸಂಸ್ಕರಣಾ ತಂತ್ರಜ್ಞಾನ ವಿಭಾಗದಲ್ಲಿ ಸಹಾಯಕ ಪ್ರಾಧ್ಯಾಪಕರಾಗಿರುವ ಅಶ್ವಿನಿ ಎ ಅವರಿಗೆ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಲಯವು ಪಿಎಚ್‌ಡಿ ಪದವಿ ನೀಡಿದೆ.

ಇತ್ತೀಚೆಗೆ ನಡೆದ ವಿವಿಯ ಘಟಿಕೋತ್ಸವದಲ್ಲಿ ರಾಜ್ಯಪಾಲರಾದ ಥಾವರಚಂದ್ ಗೆಹ್ಲೋಟ್ ಅವರು ಡಾ.ಅಶ್ವಿನಿ ಅವರಿಗೆ ಪಿಎಚ್‌ಡಿ ಪದವಿ ನೀಡಿ ಗೌರವಿಸಿದರು.

ಮಹಿಳಾ ವಿವಿಯ ಆಹಾರ ಸಂಸ್ಕರಣೆ ಮತ್ತು ಪೋಷಣೆ ವಿಭಾಗದ ಪ್ರಾಧ್ಯಾಪಕ ಡಾ.ಪ್ರಶಾಂತ್ ಎಸ್ ಜೆ ಅವರ ಮಾರ್ಗದರ್ಶನದಲ್ಲಿ ಅಶ್ವಿನಿ ಎ ಅವರು "ಎಫೆಕ್ಟ್ ಆಫ್ ವೈಟ್ ಫಿಂಗರ್ ಮಿಲ್ಲೆಟ್ (ಎಲ್ಯೂಸಿನ್ ಕೊರಕಾನ) ಫ್ಲೋರ್ ಆನ್ ರಿಯೊಲಾಜಿಕಲ್, ಫಿಸಿಕೊ, ಸೆನ್ಸರಿ, ನ್ಯೂಟ್ರಿಷಿನಲ್ ಆಂಡ್ ಕ್ವಾಲಿಟಿ ಕ್ಯಾರಕ್ಟೆರಿಸ್ಟಿಕ್ಸ್ ಆಫ್ ಕಾಂಪೋಸಿಟ್ ಬ್ರೆಡ್" ಕುರಿತು ಸಂಶೋಧನೆ ನಡೆಸಿ ಮಹಾಪ್ರಬಂಧ ಸಲ್ಲಿಸಿದ್ದರು.

ಡಾಕ್ಟರೇಟ್ ಪದವಿ ಪಡೆದಿರುವ ಅಶ್ವಿನಿ ಎ ಅವರನ್ನು ಕುಲಪತಿ ಪ್ರೊ.ಬಿ.ಕೆ.ತುಳಸಿಮಾಲ, ಕುಲಸಚಿವ ಶಂಕರಗೌಡ ಸೋಮನಾಳ ಮತ್ತು ಪ್ರಾಧ್ಯಾಪಕ ಡಾ.ಪ್ರಶಾಂತ್ ಎಸ್ ಜೆ ಅವರು ಅಭಿನಂದಿಸಿದ್ದಾರೆ.

## ಮಹಿಳೆ ನಾಪತ್ತೆ

ಬೆಳಗಾವಿ,ಮಾ. : ಯಲ್ಲವ್ವ ಯಶವಂತ ರಾಮೋಜಿ (37) ಎಂಬ ಮಹಿಳೆಯು ಮಾ.7 ರಂದು ಬೆಳಿಗ್ಗೆ 6 ಗಂಟೆಗೆ ಸುಮಾರಿಗೆ ಕೆಲಸಕ್ಕೆ ಹೋಗುತ್ತೇನೆ ಎಂದು ಹೇಳಿ ಹೊದವಳು ಮರಳಿ ಮನೆಗೆ ಬಾರದೇ ಕಾಣೆಯಾಗಿರುತ್ತಾಳೆ.



ನಾಪತ್ತೆಯಾದ ಮಹಿಳೆಯ ಪತಿಯಾದ ಯಶವಂತ ರಾಮಪ್ಪ ರಾಮೋಜಿ ಎಂಬ ವ್ಯಕ್ತಿಯು ಮುಡಲಗಿ ತಾಲೂಕಿನ ಕುಲಗೋಡ ಪೊಲೀಸ್ ಠಾಣೆಗೆ ಹಾಜರಾಗಿ ವರದಿ ನೀಡಿದ್ದು, ಪ್ರಕರಣ ದಾಖಲಿಸಿ ತನಿಖೆ ಕೈಗೊಳ್ಳಲಾಗಿರುತ್ತದೆ.

ಸದರಿ ಮಹಿಳೆಯು ಕುರಿತು ಮಾಹಿತಿ ದೊರೆತಲ್ಲಿ ಕುಲಗೋಡ ಪೊಲೀಸ್ ಠಾಣೆ ದೂರವಾಣಿ ಸಂಖ್ಯೆ 08334-222233 ಗೆ ಸಂಪರ್ಕಿಸಬಹುದು ಎಂದು ಕುಲಗೋಡ ಪೊಲೀಸ್ ಠಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಲಯಾಧಾರಿತ ಉದ್ಯಮಶೀಲತಾಭಿವೃದ್ಧಿ ತರಬೇತಿಗೆ ಅರ್ಜಿ ಆಹ್ವಾನ

ಕೊಪ್ಪಳ, ಮಾರ್ಚ್ 16 : ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ, ಕಲಬುರಗಿ ಹಾಗೂ ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಕೇಂದ್ರ(ಸಿಡಾಕ್), ಕೊಪ್ಪಳ ಇವರ ಸಂಯುಕ್ತಾಶ್ರಯದಲ್ಲಿ ಸ್ವಯಂ ಉದ್ಯಮಗಳನ್ನು ಪ್ರಾರಂಭಿಸಲು ಆಸಕ್ತರಿಗೆ ವಿವಿಧ ವೃತ್ತಿಗಳಲ್ಲಿ 30 ದಿನಗಳ ನಿರ್ದಿಷ್ಟ ವಲಯಾಧಾರಿತ ಉದ್ಯಮಶೀಲತಾಭಿವೃದ್ಧಿ ತರಬೇತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ಜಿಲ್ಲೆಯ ಕೊಪ್ಪಳದಲ್ಲಿ ಕಂಪ್ಯೂಟರ್ ಹಾರ್ಡ್‌ವೇರ್ ಮತ್ತು ನೆಟ್‌ವರ್ಕಿಂಗ್ ತರಬೇತಿ, ಕುಷ್ಟಗಿಯಲ್ಲಿ ಬ್ಯೂಟಿ ಪಾರ್ಲರ್ ಮ್ಯಾನೇಜ್‌ಮೆಂಟ್ ಬಗ್ಗೆ ತರಬೇತಿ, ಯಲಬುರ್ಗಾದಲ್ಲಿ ಫ್ಯಾಷನ್ ಡಿಸೈನಿಂಗ್ ಬಗ್ಗೆ ತರಬೇತಿ, ಗಂಗಾವತಿಯಲ್ಲಿ ಎಲೆಕ್ಟ್ರಿಕಲ್ ಹೋಮ್ ಅಪ್ಲೈಯನ್ಸ್‌ಸ್ ಬಗ್ಗೆ ತರಬ್ಬೆತಿ ಹಾಗೂ ಕುಕನೂರಿನಲ್ಲಿ ಮೊಬೈಲ್ ಫೋನ್ಸ್ ರಿಪೇರ್ಸ್ & ಸರ್ವೀಸಿಂಗ್ ಬಗ್ಗೆ ತರಬೇತಿಗಳನ್ನು ಹಮ್ಮಿಕೊಳ್ಳಲು ಯೋಜಿಸಲಾಗಿದೆ.

ಕಾರ್ಯಕ್ರಮದಲ್ಲಿ ಆಯಾ ವೃತ್ತಿಗಳಲ್ಲಿ ಪ್ರಾಯೋಗಿಕ ಹಾಗೂ ಸಿದ್ಧಾಂತದೊಂದಿಗೆ ಸ್ವಯಂ ಉದ್ಯಮಗಳ ಬಗ್ಗೆ ಮಾಹಿತಿ, ಉದ್ಯಮಶೀಲತೆ, ಯಶಸ್ವಿ ಉದ್ಯಮಶೀಲರ ಗುಣಲಕ್ಷಣಗಳು, ಉದ್ಯಮಗಳನ್ನು ಪ್ರಾರಂಭಿಸುವ ಹಂತಗಳು, ಸ್ವಯಂ ಉದ್ಯೋಗಕ್ಕೆ ಇರುವ ಸರ್ಕಾರದ ಯೋಜನೆಗಳು, ಬ್ಯಾಂಕ್ ವ್ಯವಹಾರ ಮಾಡುವ ಬಗ್ಗೆ, ಸಾಲ ಮತ್ತು ಹಣಕಾಸು ಮತ್ತು ಹಣಕಾಸೇತರ ಸೌಲಭ್ಯಗಳ ಬಗ್ಗೆ, ಲೆಕ್ಕ ಪತ್ರ ನಿರ್ವಹಣೆ, ಯೋಜನಾ ವರದಿ ತಯಾರಿಕೆ, ಸಾಲ ಸೌಲಭ್ಯಕ್ಕಾಗಿ ಅರ್ಜಿ ಸಲ್ಲಿಸುವಲ್ಲಿ ಸಹಾಯ ನೀಡುವದು ಮತ್ತು ಸಂಬಂಧಪಟ್ಟ ಇತ್ಯಾದಿ ವಿಷಯಗಳ ಬಗ್ಗೆ ಅನುಭವಿ ಅತಿಥಿ ಬೋಧಕರಿಂದ ಉಪನ್ಯಾಸ, ಮಾಹಿತಿ ನೀಡಲಾಗುವುದು. ಕಾರ್ಯಕ್ರಮದಲ್ಲಿ ಭಾಗವಹಿಸಲು ಆಸಕ್ತರಿರುವ 18 ರಿಂದ 40 ವರ್ಷದೊಳಗಿನ, ಕನಿಷ್ಠ ಎಸ್.ಎಸ್.ಎಲ್.ಸಿ ಪಾಸ್ ಆದ ಎಲ್ಲಾ ವರ್ಗದ ಮಹಿಳಾ ಮತ್ತು ಪುರುಷ ಅಭ್ಯರ್ಥಿಗಳು ಜಂಟಿ ನಿರ್ದೇಶಕರು, ಸಿಡಾಕ್, ಜಿಲ್ಲಾ ಕೈಗಾರಿಕಾ ಕೇಂದ್ರದ ಕಟ್ಟಡ, ಹೊಸಪೇಟೆ ರಸ್ತೆ, ನಗರ ಸಭೆ ಎದುರು, ಕೊಪ್ಪಳ583231, ಇಲ್ಲಿಗೆ ಮಾರ್ಚ್ 28 ರೊಳಗಾಗಿ ಭೇಟಿ ನೀಡಿ ಅಥವಾ ಮೊಬೈಲ್ ಸಂಖ್ಯೆ: 8867748956, 9108972833 & 9986332736 ಗೆ ಕರೆ ಮಾಡಿ ತಮ್ಮ ಹೆಸರನ್ನು ನೋಂದಾ ಯಿಸಿಕೊಳ್ಳ ಬಹುದಾಗಿದೆ. 30 ಅಭ್ಯರ್ಥಿಗಳ ತಂಡದಲ್ಲಿ ಪರಿಶಿಷ್ಟ ಜಾತಿ ಅಭ್ಯರ್ಥಿಗಳಿಗೆ ಶೇ.35 ರಷ್ಟು ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಶೇ.15 ರಷ್ಟು ಆದ್ಯತೆ ನೀಡಲಾಗುವದು ಎಂದು ಕೊಪ್ಪಳ ಸಿಡಾಕ್ ಜಂಟಿ ನಿರ್ದೇಶಕರಾದ ಜಿ.ಯು.ಹುಡೇದ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.